# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1414
2) ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು)
3) ಉತ್ತರಿಸುವ ದಿನಾಂಕ : 28-02-2018
4) ಉತ್ತರಿಸಬೇಕಾದ ಸಚಿವರು : ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಾರ್ಷಿಕ ಮೀನುಗಾರಿಕೆಗೆ ಎಷ್ಟು ಸೀಮೆಎಣ್ಣೆಯನ್ನು ಪೂರೈಸಲಾಗುತ್ತಿದೆ; ವಿವರ ಒದಗಿಸುವುದು; | ಮೋಟರೀಕೃತ ದೋಣಿಗಳಿಗೆ ಅಗತ್ಯವಿರುವ ಸೀಮೆಎಣ್ಣೆಯನ್ನು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಿಂದ ಪಡಿತರ ದರದಲ್ಲಿ ವಿತರಣೆ ಮಾಡಲಾಗುತ್ತಿದೆ. ಮೀನುಗಾರರಿಗೆ ಹಂಚಿಕೆ ಮಾಡಲು ಕೇಂದ್ರ ಸರ್ಕಾರವು ನೀಡುವ ಸಬ್ಸಿಡಿಯುಕ್ತ ಸೀಮೆಎಣ್ಣೆಯನ್ನೇ ಉಪಯೋಗಿಸುತ್ತಿದ್ದು, ಇದಕ್ಕಾಗಿ ಪ್ರತ್ಯೇಕ ಅನುದಾನ ಇರುವುದಿಲ್ಲ. ಮೀನುಗಾರಿಕೆಗೆ ಮಾಸಿಕ ಒಟ್ಟು 1355 ಕಿಲೀ ಸೀಮೆಎಣ್ಣೆ ನೀಡಲಾಗುತ್ತಿದೆ. |
| ಆ) | ಮೀನುಗಾರಿಕೆಯನ್ನು ಪ್ರೋತ್ಸಾಹಿಸಲು ಇಲಾಖೆ ಕೈಗೊಂಡಿರುವ ಕ್ರಮಗಳೇನು; (ವಿವರ ಒದಗಿಸುವುದು)<br>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಂದ ವರ್ಷದಲ್ಲಿ ಎಷ್ಟು ಟನ್ ಮೀನುಗಾರಿಕೆಯನ್ನು ಹೊರ ಜಿಲ್ಲೆಗಳಿಗೆ ಕಳುಹಿಸಲಾಗುತ್ತಿದೆ; (ವಿವರ ಒದಗಿಸುವುದು) | ಮೀನುಗಾರಿಕೆಯನ್ನು ಪ್ರೋತ್ಸಾಹಿಸಲು ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಾರ್ಯಕ್ರಮ / ಯೋಜನೆಗಳ ವಿವರಗಳನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ.<br>ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಿಂದ ಹೊರ ಜಿಲ್ಲೆಗಳಿಗೆ ಕಳುಹಿಸಲಾಗುವ ಮೀನಿನ ಮಾಹಿತಿ ಲಭ್ಯವಿರುವುದಿಲ್ಲ. |
| ಇ) | ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಮೀನುಗಾರಿಕೆಯನ್ನು ನಡೆಸಲು ಪ್ರೋತ್ಸಾಹ ನೀಡಲಾಗುವುದು? (ವಿವರ ಒದಗಿಸುವುದು) | ಎಲ್ಲಾ ಜಿಲ್ಲೆಗಳಲ್ಲೂ, ಆಯಾ ಜಿಲ್ಲೆಗಳ ಮೀನುಗಾರಿಕೆ ಸಂಪನ್ಮೂಲಗಳಿಗನುಗುಣವಾಗಿ ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ಮೂಲಕ ಮೀನುಗಾರಿಕೆ ನಡೆಸಲು ಪ್ರೋತ್ಸಾಹ ನೀಡಲಾಗುತ್ತದೆ. |

ಸಂಖ್ಯೆ: ಪಸಂಮೀ 41 ಮೀಇಇ 2018

# ಅನುಬಂಧ-

## ಮೀನುಗಾರಿಕೆ ಇಲಾಖೆಯಿಂದ ರಾಜ್ಯದಲ್ಲಿ ಮೀನುಗಾರಿಕೆಯ ಅಭಿವೃದ್ಧಿಗಾಗಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಮಾಹಿತಿ

- ಮೀನುಮರಿ ಉತ್ಪಾದನೆ, ಪಾಲನೆ ಮತ್ತು ವಿತರಣೆ ಹಾಗೂ ಮೀನುಮರಿ ಉತ್ಪಾದನೆ/ಪಾಲನಾ ಕೇಂದ್ರಗಳ ನಿರ್ಮಾಣ ಹಾಗೂ ನಿರ್ವಹಣೆ ಕೈಗೊಳ್ಳುವುದು
- ಮೀನು ಕೃಷಿ ಮಾಡುವವರಿಗೆ ಮೀನುಮರಿ ಖರೀದಿಗೆ ಶೇ.50 ರಷ್ಟು ವ್ಯಕ್ತಿಗಳಿಗೆ ಗರಿಷ್ಠ ರೂ.5000.00 ಮೀನುಗಾರರ ಸಹಕಾರ ಸಂಘಗಳಿಗೆ ಗರಿಷ್ಠ ರೂ.20,000 ಮತ್ತು ಮೀನು ಮರಿ ಸಾಕಾಣಿಕೆದಾರರಿಗೆ ಗರಿಷ್ಠ ರೂ.25,000/- ಸಹಾಯಧನವನ್ನು ನೀಡುವುದು
- ರಾಜ್ಯದ ಆಯ್ದ ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು
- "ಮತ್ಸ್ಯ ಕೃಷಿ ಆಶಾ ಕಿರಣ" ಯೋಜನೆಯಡಿ ಕೆರೆಗಳಲ್ಲಿ ಮೀನು ಕೃಷಿ ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್‌ಗೆ 4,000 ಬಲಿತ ಮೀನು ಮರಿಗಳನ್ನು ಹಾಗೂ 2 ಟನ್ ಕೃತಕ ಆಹಾರವನ್ನು ಖರೀದಿಸಲು ಘಟಕ ವೆಚ್ಚದ ಶೇ.50 ರಷ್ಟು ಹಾಗೂ ಗರಿಷ್ಠ 27,000 ರೂ.ಗಳನ್ನು ನೀಡಲಾಗುವ್ಯದು.
- ಒಳನಾಡು ಮೀನುಗಾರರಿಗೆ ರೂ.10,000/- ವೆಚ್ಚದ ಫೈಬರ್‌ಗ್ಲಾಸ್ ಹರಿಗೋಲು ಉಚಿತವಾಗಿ ವಿತರಿಸುವುದು
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಕ್ಕೆ ಸೇರಿದ ಮೀನುಗಾರರಿಗೆ ಮೀನು ಕೊಳಗಳ ನಿರ್ಮಾಣಕ್ಕೆ ಸಹಾಯ, ಮೀನು ಮರಿ ಸಾಕಾಣಿಕೆಗೆ ಹೂಡಿಕೆ ವೆಚ್ಚ, ಮೀನು ಮರಿ ಸಾಗಾಣಿಕೆ ವಾಹನ ಖರೀದಿಗೆ ನೆರವು, ತರಬೇತಿ, ಎಫ್.ಆರ್.ಪಿ ಗಿಲ್ ನೆಟ್ ದೋಣಿಗಳ ಖರೀದಿ, ಪಾತಿ ದೋಣಿ ಖರೀದಿ ಮತ್ತು ಇತರೆ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುವುದು
- ಉತ್ತರ ಕರ್ನಾಟಕದಲ್ಲಿ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳಲಾಗುವುದು
- ಕ್ಲಸ್ಟರ್ ಮಾದರಿಯಲ್ಲಿ ಮೀನುಗಾರಿಕೆ ಅಭಿವೃದ್ಧಿ ಯೋಜನೆಯಡಿ ಮೀನು ಕೊಳ ನಿರ್ಮಾಣಕ್ಕೆ ಸಹಾಯ, ಮೀನು ಮರಿ ಪಾಲನೆಗೆ ಸಹಾಯ
- ಮೀನುಗಾರಿಕೆ ಬಂದರು ಮತ್ತು ಇಳಿದಾಣ ಕೇಂದ್ರಗಳ ನಿರ್ವಹಣೆ ಮತ್ತು ಅಭಿವೃದ್ಧಿಪಡಿಸುವುದು
- ಮತ್ಸ್ಯಾಶ್ರಯ ಯೋಜನೆಯಡಿ ವಸತಿ ರಹಿತ ಮೀನುಗಾರರಿಗೆ ಮನೆ ನಿರ್ಮಿಸಲು ರೂ.1.20 ಲಕ್ಷ ಸಹಾಯಧನ ನೀಡುವುದು
- ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ಬಳಸುವ ಡೀಸೆಲ್‌ಗೆ ರಾಜ್ಯ ಮಾರಾಟ ಕರಕ್ಕೆ ಸಮನಾದ ಮೊತ್ತವನ್ನು ಸಹಾಯಧನವಾಗಿ ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ನೇರವಾಗಿ ಬಿಡುಗಡೆ ಮಾಡುವುದು

- ಮೀನು ಕೃಷಿಯ ಕುರಿತು ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕೆ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶನಗಳನ್ನು ಏರ್ಪಡಿಸುವುದು
- ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ ಯೋಜನೆಯಡಿ ರೂ.10,000/- ಗಳ ವೆಚ್ಚದ ಮೀನುಗಾರಿಕೆ ಸಲಕರಣೆಗಳಾದ ಮೀನು ಹಿಡಿಯುವ ಬಲೆ ಮತ್ತು ಪೂರಕ ಸಾಮಗ್ರಿಗಳನ್ನು "ಕಿಟ್" ರೂಪದಲ್ಲಿ ನೀಡುವುದು
- ಮಂಜುಗಡ್ಡೆ ಘಟಕಗಳು ಉಪಯೋಗಿಸಿದ ವಿದ್ಯುಚ್ಛಕ್ತಿಗೆ ಸಹಾಯಧನ ನೀಡುವುದು
- ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆಯಡಿ ಮೀನುಗಾರಿಕೆ ನಿಷೇಧಿತ ಅವಧಿಯಲ್ಲಿ ಹಣಕಾಸಿನ ನೆರವು ನೀಡುವುದು
- ಸಂಕಷ್ಟ ಪರಿಹಾರ ನಿಧಿ ಯೋಜನೆಯಡಿ ನೈಸರ್ಗಿಕ ವಿಕೋಪದಿಂದ ಮರಣ ಹೊಂದಿದ ಮೀನುಗಾರರ ಅವಲಂಬಿತರಿಗೆ ಹಾಗೂ ಶಾಶ್ವತ ಅಂಗವಿಕಲರಾದ ಮೀನುಗಾರರಿಗೆ ರೂ.2.00 ಲಕ್ಷ, ಭಾಗಶಃ ಅಂಗವಿಕಲರಾದವರಿಗೆ ರೂ.1.00 ಲಕ್ಷ, ಬಲೆಹಾನಿ, ದೋಣಿಹಾನಿ ಮತ್ತು ವೈದ್ಯಕೀಯ ವೆಚ್ಚಗಳಿಗೆ ಗರಿಷ್ಠ ರೂ.25,000/- ಪರಿಹಾರ ನೀಡುವುದು
- ಸಾಮೂಹಿಕ ಜನತಾ ಅಪಘಾತ ವಿಮಾ ಯೋಜನೆಯಡಿ, ಮೀನುಗಾರಿಕೆಯಲ್ಲಿ ತೊಡಗಿರುವಾಗ ಮೃತರಾಗುವ ಮೀನುಗಾರರ ಸಹಕಾರ ಸಂಘದ–ಸದಸ್ಯತ್ವ ಹೊಂದಿರುವ ಮೀನುಗಾರರ ಅವಲಂಬಿತರಿಗೆ ರೂ.2.00 ಲಕ್ಷ ವಿಮಾ ಮೊತ್ತವನ್ನು ನೀಡುವುದು
- ಮೀನುಗಾರಿಕೆ ಕೊಂಡಿ ರಸ್ತೆಗಳ ನಿರ್ವಹಣೆ ಯೋಜನೆಯಡಿ ರಾಜ್ಯದಲ್ಲಿರುವ ಮೀನುಗಾರಿಕೆ ಕೊಂಡಿ ರಸ್ತೆಗಳ ನಿರ್ವಹಣೆ
- ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ವಾಣಿಜ್ಯ ಬ್ಯಾಂಕುಗಳ ಮೂಲಕ ಶೇ.2 ರಷ್ಟು ಬಡ್ಡಿದರದಲ್ಲಿ ರೂ.50,000ಗಳ ವರೆಗೆ ಸಾಲ ನೀಡುವುದು
- ಒಳನಾಡು ಮೀನುಗಾರಿಕೆಯಲ್ಲಿ ನೀಲಿ ಕ್ರಾಂತಿ ತರಲು ರಾಜ್ಯದ ಒಳನಾಡು ಮೀನು ಕೃಷಿಕರಿಗೆ ಸಹಕಾರಿ ಬ್ಯಾಂಕುಗಳ ಮೂಲಕ ಶೂನ್ಯ ಬಡ್ಡಿದರದಲ್ಲಿ ರೂ.1.00 ಲಕ್ಷಗಳವರೆಗೆ ಅಲ್ಪಾವಧಿ ಸಾಲ ನೀಡುವುದು
- ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಕ್ಲಸ್ಟರ್ ಮಾದರಿಯಲ್ಲಿ ಮೀನುಕೃಷಿ ಅಭಿವೃದ್ಧಿ, ಹಿಂದುಳಿದ ತಾಲ್ಲೂಕುಗಳಲ್ಲಿ ವಿಶೇಷ ಅಭಿವೃದ್ಧಿ ಯೋಜನೆ, ನಿರ್ಮಲ ಮೀನು ಮಾರಾಟ ವ್ಯವಸ್ಥೆಯ ವಿಸ್ತರಣೆ ಮತ್ತು ಆಧುನೀಕರಣ ಯೋಜನೆ, ಮೀನುಮರಿ ಉತ್ಪಾದನಾ ಕೇಂದ್ರಗಳ ನವೀಕರಣ, ಅಲಂಕಾರಿಕ ಮೀನು ಉತ್ಪಾದನೆಗೆ ತರಬೇತಿ
- ಮೀನುಗಾರಿಕೆ ಬಂದರುಗಳ ಹೂಳೆತ್ತುವಿಕೆ ಯೋಜನೆಯಡಿ ಮೀನುಗಾರಿಕೆ ಬಂದರುಗಳ ಹೂಳೆತ್ತುವುದು
- ಕೇಂದ್ರ ಸರ್ಕಾರದ ನೆರವಿನೊಂದಿಗೆ ಮೀನುಗಾರಿಕೆ ಬಂದರುಗಳ ನಿರ್ಮಾಣ ಕಾಮಗಾರಿಗಳನ್ನು ತೆಗೆದುಕೊಳ್ಳುವುದು

- ರಾಜ್ಯ ಸರ್ಕಾರದ ಆರ್ಥಿಕ ನೆರವಿನೊಂದಿಗೆ ಮೀನುಗಾರಿಕೆ ಜಟ್ಟಿ ಮತ್ತು ಇಳಿದಾಣ ಕೇಂದ್ರಗಳ ನಿರ್ಮಾಣ ಕೈಗೊಳ್ಳುವುದು
- ಮೀನುಗಾರರ ಸಹಕಾರ ಸಂಘಗಳು ತಮ್ಮ ಸ್ವಂತ ನಿವೇಶನದಲ್ಲಿ ನೀರು, ವಿದ್ಯುಚ್ಛಕ್ತಿ ಮತ್ತು ಇತರ ಸೌಲಭ್ಯಗಳೊಂದಿಗೆ ಕನಿಷ್ಠ 500 ಚದರಡಿಯ ಮೀನು ಸಂಗ್ರಹಣೆ ಹಾಗೂ ಮಾರುಕಟ್ಟೆ ಕಟ್ಟಡವನ್ನು ನಿರ್ಮಿಸಲು ಅಂದಾಜು 10 ಲಕ್ಷ ರೂ.ಗಳ ಘಟಕ ವೆಚ್ಚದಲ್ಲಿ ಶೇ.75 ರಷ್ಟು ಸಹಾಯಧನ
- ಕೇಂದ್ರ ಪುರಸ್ಕೃತ ನೀಲಿ ಕ್ರಾಂತಿ ಯೋಜನೆಯಡಿ ವಿವಿಧ ಯೋಜನೆಗಳ ಅನುಷ್ಠಾನ
- ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ
- ಕೆರೆಗಳಲ್ಲಿ ಬೆಳೆದಿರುವ ಕಳೆಗಳ ನಿರ್ಮೂಲನೆಗೆ ಹುಲ್ಲುಗೆಂಡೆ ಮೀನುಮರಿ ಬಿತ್ತನೆ ಮಾಡಲು ಸಹಾಯಧನ ನೀಡುವುದು
- ಸ್ವಂತ ನೀರಾವರಿ ಬಾವಿ ಮತ್ತು ಹೊಂಡಗಳಲ್ಲಿ ಮೀನು ಕೃಷಿಯನ್ನು ತೆಗೆದುಕೊಳ್ಳಲು ಕೃಷಿಕರಿಗೆ ಉಚಿತವಾಗಿ ಸಾಮಾನ್ಯ ಗೆಂಡೆ ಮೀನುಮರಿ ಸರಬರಾಜು ಮಾಡುವುದು
- ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್, ದ್ವಿಚಕ್ರ ವಾಹನ, ತ್ರಿಚಕ್ರ ಟೆಂಪೋರಿಕ್ಷಾ ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಸಹಾಯಧನ ನೀಡುವುದು
- ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ, ಹೈದರಾಬಾದ್ ಹಾಗೂ ರಾಜ್ಯ ಸರ್ಕಾರದ ಅನುದಾನದಿಂದ ಮೀನು ಮಾರುಕಟ್ಟೆಗಳ ನಿರ್ಮಾಣ, ಕೆರೆ/ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ.
- ರಾಜ್ಯದಲ್ಲಿರುವ ಜಲ ಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ಮೀನುಗಾರಿಕೆ ಸಹಕಾರ ಸಂಘಗಳಿಗೆ ಪರಿಷ್ಕೃತ ಗುತ್ತಿಗೆ ನೀತಿಯ ಪ್ರಕಾರ ಅತ್ಯಲ್ಪ ಮೊತ್ತಕ್ಕೆ ಧೀರ್ಘಾವಧಿಗೆ ಆದ್ಯತೆಯ ಮೇಲೆ ಗುತ್ತಿಗೆ ನೀಡಲಾಗುತ್ತಿದೆ.